ಕರ್ನಾಟಕ ಸರ್ಕಾರ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ

ಕನ್ನಡ ಭವನ, ಜೆ.ಸಿ. ರಸ್ತೆ
ಬೆಂಗಳೂರು-2, ದಿನಾಂಕ:25.08.2015.

## :ಪ್ರಕಟಣೆಯ ಕೃಪೆಗಾಗಿ:

**ಪರಿಶಿಷ್ಟ ಜಾತಿ/ ಪಂಗಡಗಳ ಅಭ್ಯರ್ಥಿಗಳಿಗೆ ಎಂ.ಫಿಲ್ ಮತ್ತು ಪಿಹೆಚ್.ಡಿ ಪ್ರಬಂಧಗಳನ್ನು ಮುದ್ರಿಸಲು ಧನಸಹಾಯಕ್ಕಾಗಿ ಅರ್ಜಿ ಆಹ್ವಾನ**

2015-16ನೇ ಸಾಲಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಅನುಸೂಚಿತ ಜಾತಿ ಮತ್ತು ಪಂಗಡಗಳ ಉಪಯೋಜನೆಯಡಿ (ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ) ಅನುಸೂಚಿತ ಜಾತಿ ಮತ್ತು ಪಂಗಡಗಳ ಸಂಶೋಧನಾ ವಿದ್ಯಾರ್ಥಿಗಳು 2014-15ನೇ ಸಾಲಿನಲ್ಲಿ ಕನ್ನಡದಲ್ಲಿ ಮಂಡಿಸಿದ ಎಂ.ಫಿಲ್ ಮತ್ತು ಪಿಹೆಚ್.ಡಿ ಪ್ರಬಂಧಗಳನ್ನು ಮುದ್ರಿಸಲು ಧನಸಹಾಯವನ್ನು ಹಸ್ತ ಪ್ರತಿ ಮುದ್ರಣಕ್ಕೆ ನೀಡಲಾಗುವುದು.

ಮೇಲಿನ ಪ್ರಬಂಧಗಳು ದಿನಾಂಕ:01.04.2014 ರಿಂದ 31.03.2015ರ ಒಳಗೆ ಯಾವುದೇ ವಿಶ್ವವಿದ್ಯಾನಿಲಯಗಳಿಂದ ಯಾವುದೇ ವಿಷಯಗಳಲ್ಲಿ ಕನ್ನಡದಲ್ಲಿ ಎಂ.ಫಿಲ್ ಮತ್ತು ಪಿಹೆಚ್.ಡಿಗೆ ಮಂಡಿಸಿ ಪದವಿ ಪಡೆದ ಪ್ರೌಢ ಪ್ರಬಂಧಗಳಾಗಿರ ಬೇಕು.

ಅರ್ಜಿ ನಮೂನೆ ಹಾಗೂ ನಿಯಮಾವಳಿಗಳಿಗೆ ಸಂಬಂಧಿಸಿದಂತೆ, ಇಲಾಖೆಯ ವೆಬ್ಸೈಟ್ www.kannadasiri.co.in ನಲ್ಲಿ ಪಡೆಯಬಹುದಾಗಿದೆ. ಮತ್ತು ಈ ಬಗ್ಗೆ ಆಯಾ ಜಿಲ್ಲೆಯ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರನ್ನು ಸಂಪರ್ಕಿಸಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ದಾಖಲೆಗಳ ಸಮೇತ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು-560002. ಇವರಿಗೆ ದಿನಾಂಕ: 25.09.2015ರ ಒಳಗಾಗಿ ಕಳುಹಿಸಿಕೊಡುವುದು. ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. **ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ. ಕನ್ನಡ ಭವನ ಜೆ.ಸಿ.ರಸ್ತೆ, ಬೆಂಗಳೂರು-560002. ಹಾಗೂ ಜಂಟಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ. ಕನ್ನಡ ಭವನ ಜೆ.ಸಿ.ರಸ್ತೆ, ಬೆಂಗಳೂರು -560002 ದೂರವಾಣಿ ಸಂ:080-22111208 ಹಾಗೂ ಮೊಬೈಲ್ ಸಂ:9449842132 ಗೆ ಸಂಪರ್ಕಿಸಬಹುದಾಗಿದೆ.**

ಕರಡು ನಿರ್ದೇಶಕರಿಂದ ಅನುಮೋದನೆಗೊಂಡಿದೆ.

ನಿರ್ದೇಶಕರ ಪರವಾಗಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಬೆಂಗಳೂರು

ಇವರಿಗೆ,
ನಿರ್ದೇಶಕರು
ವಾರ್ತಾ ಇಲಾಖೆ, ಇನ್ ಫೆಂಟ್ರಿ ರಸ್ತೆ,
ಬೆಂಗಳೂರು.

ಮಾನ್ಯರೆ ದಯವಿಟ್ಟು, ಮೇಲಿನ ಪತ್ರಿಕಾ ಪ್ರಕಟಣೆನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಬೇಕೆಂದು ಕೋರುತ್ತೇನೆ.